ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಉ ನಿ : ಸುಮಪ : 2017–18** **ದಿನಾಂಕ: 31–10–2018**

## <u>ಪತ್ರಿಕಾ ಆಮಂತ್ರಣ</u>

1. ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆ ವತಿಯಿಂದ 63ನೇ ಕರ್ನಾಟಕ ರಾಜ್ಯೋತ್ಸವ ಸಮಾರಂಭ ಮತ್ತು ಮಕ್ಕಳ ಮೇಳ – 2018.

   **<u>ಧ್ವಜಾರೋಹಣ ಹಾಗೂ ರಾಜ್ಯೋತ್ಸವ ಸಂದೇಶ:</u>**

   ಹೆಚ್. ಡಿ. ಕುಮಾರಸ್ವಾಮಿ, ಮುಖ್ಯಮಂತ್ರಿಗಳು, ಕರ್ನಾಟಕ

   **<u>ಅಧ್ಯಕ್ಷತೆ:</u>**

   ಆರ್. ರೋಷನ್ ಬೇಗ್, ಶಾಸಕರು, ಶಿವಾಜಿನಗರ ವಿಧಾನಸಭಾ ಕ್ಷೇತ್ರ.

   ದಿನಾಂಕ: 01–11–2018 ಗುರುವಾರ, ಸಮಯ: ಬೆಳಿಗ್ಗೆ 9–00 ಗಂಟೆಗೆ

   ಸ್ಥಳ: ಶ್ರೀ ಕಂಠೀರವ ಕ್ರೀಡಾಂಗಣ, ಬೆಂಗಳೂರು.

2. The Diploma Investiture Ceremony
   Convocation address:
   S.L. Patil, State Information Commissioner, Karnataka Information Commission, Bengaluru.
   Award the Diploma Certificates:
   B.S. Shekharappa, Director, Municipal Administration, G.O.K.

   President:
   W.P. Krishna, President, Karnataka Gandhi Smaraka Nidhi,

   Date: 02-11-2018, Friday Time 9.00 AM

   Place: Bapu Hall, Gandhi **B**havan, Kumara Park East, near Shivananda Circle, Bengaluru – 560 001.

3. ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ವತಿಯಿಂದ ರೋವರ್ಸ್/ ರೇಂಜರ್ಸ್ ಮೂಟ್‌ನ ಉದ್ಘಾಟನಾ ಸಮಾರಂಭ:

**ಉದ್ಘಾಟನೆ:**

ಶ್ರೀ ವಾಜುಭಾಯಿ ವಾಲಾ, ರಾಜ್ಯಪಾಲರು, ಕರ್ನಾಟಕ ಸರ್ಕಾರ.

ದಿನಾಂಕ: 02-11-2018 ಶುಕ್ರವಾರ, ಸಮಯ: ಬೆಳಿಗ್ಗೆ 10-30 ಗಂಟೆಗೆ

ಸ್ಥಳ: ಶ್ರೀ ಸತ್ಯ ಸಾಯಿ ಗ್ರಾಮ, ಮುದ್ದೇನಹಳ್ಳಿ, ಚಿಕ್ಕಬಳ್ಳಾಪುರ ಜಿಲ್ಲೆ.
ಸೂಚನೆ : ಈ ಕಾರ್ಯಕ್ರಮಕ್ಕೆ ಮಾಧ್ಯಮ ಪ್ರತಿನಿಧಿಗಳನ್ನು ಕರೆದೊಯ್ಯಲು ವಾಹನ ವ್ಯವಸ್ಥೆ ಮಾಡಲಾಗಿದ್ದು, ವಾಹನವು ಅಂದು ಬೆಳಿಗ್ಗೆ 8.00 ಗಂಟೆಗೆ ನಗರದ ಬೆಂಗಳೂರು ಪ್ರೆಸ್ ಕ್ಲಬ್, ಕಬ್ಬನ್ ಪಾರ್ಕ್ ಆವರಣದಿಂದ ನಿಗದಿತ ಸ್ಥಳದತ್ತ ತೆರಳಲಿದೆ.

**ಸಂಪರ್ಕ:** ಕೆ.ಹೆಚ್. ಜಯರಾಮಯ್ಯ, ಮೊಬೈಲ್ ಸಂಖ್ಯೆ 9986708970

4. ಕರ್ನಾಟಕ ವಿಧಾನಸಭೆಯ ಅರ್ಜಿಗಳ ಸಮಿತಿ ಸಭೆ ಹಾಗೂ
ಬೆಂಗಳೂರು ಗ್ರಾಮಾಂತರ ಜಿಲ್ಲೆ ಆನೇಕಲ್ ತಾಲ್ಲೂಕಿನ ಹುಲಿಮಂಗಲ ಗ್ರಾಮ ಹಾಗೂ ಇತರ ಗ್ರಾಮಗಳ ಸರ್ಕಾರಿ ಜಮೀನು ಸಂಬಂಧಿಸಿದಂತೆ ಪರಿವೀಕ್ಷಣೆ

**ಅಧ್ಯಕ್ಷತೆ:**

ಎಂ. ಕೃಷ್ಣಾರೆಡ್ಡಿ, ವಿಧಾನ ಸಭೆಯ ಉಪ ಸಭಾಧ್ಯಕ್ಷರು ಹಾಗೂ ಸಮಿತಿ ಅಧ್ಯಕ್ಷರು.

ದಿನಾಂಕ: 02-11-2018 ಶುಕ್ರವಾರ, ಸಮಯ: ಬೆಳಿಗ್ಗೆ 11-30 ಗಂಟೆಗೆ

ಸ್ಥಳ: ಕೊಠಡಿ ಸಂಖ್ಯೆ 135, ಮೊದಲನೇ ಮಹಡಿ, ವಿಧಾನಸೌಧ, ಬೆಂಗಳೂರು.

ಸಂಖ್ಯೆ

ಪತ್ರಿಕಾ ಪ್ರಕಟಣೆ

## ಪ್ರೋತ್ಸಾಹ ಧನಕ್ಕಾಗಿ ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 31, (ಕರ್ನಾಟಕ ವಾರ್ತೆ)

2018-19 ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆಯಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ಶೇಕಡಾ 60 ರಿಂದ 74.99 ಅಂಕಗಳನ್ನು ಪಡೆದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ರೂ 7,000/-ಗಳನ್ನು ಹಾಗೂ ಶೇಕಡಾ 75 ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದು ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ರೂ 15,000/- ಗಳ ಪ್ರೋತ್ಸಾಹ ಧನ ಮಂಜೂರು

ಮಾಡಲು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಈ ಕೆಳಗೆ ನಮೂದಿಸಿರುವ ಷರತ್ತುಗಳನ್ನು ಪೂರೈಸಿದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಹುದಾಗಿದೆ.

ವಿದ್ಯಾರ್ಥಿಯು ಕರ್ನಾಟಕ ರಾಜ್ಯದವರಾಗಿರಬೇಕು. ವಿದ್ಯಾರ್ಥಿಯು ಪರಿಶಿಷ್ಟ ಜಾತಿಗೆ ಸೇರಿರಬೇಕು. ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಪ್ರಥಮ ಪ್ರಯತ್ನದಲ್ಲಿ ಶೇ 60 ಕ್ಕಿಂತ ಹೆಚ್ಚು ಅಂಕ ಪಡೆದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಮಂಜೂರು ಮಾಡಲಾಗುವುದು.

ಆನ್‌ಲೈನ್ ನೋಂದಣಿ ಮಾಡಲು ಬೇಕಾದ ಅಗತ್ಯ ದಾಖಲೆಗಳ ವಿವರ:

ಎಸ್.ಎಸ್.ಎಲ್.ಸಿ. ನೊಂದಣಿ ಸಂಖ್ಯೆ, ಆಧಾರ್ ಕಾರ್ಡ್‌ನಲ್ಲಿರುವಂತೆ ನಿಮ್ಮ ಹೆಸರು ಮತ್ತು ಆಧಾರ್ ಸಂಖ್ಯೆ. ಜಾತಿ ಪ್ರಮಾಣ ಪತ್ರದ ಆರ್.ಡಿ. ಸಂಖ್ಯೆ. ಅರ್ಜಿದಾರರ ಆಳತೆಯ ಫೋಟೋ (jpeg/jpg20kb), ಸ್ಕ್ಯಾನ್ ಮಾಡಲಾದ ಎಸ್.ಎಸ್.ಎಲ್.ಸಿ. ಪ್ರಮಾಣ ಪತ್ರ ()jpeg/jpg100kb, ಆಧಾರ್ ಲಿಂಕ್ ಮಾಡಲಾದ ಬ್ಯಾಂಕ್ ಖಾತೆ ವಿವರ ಹಾಗೂ ಅರ್ಜಿ ಸಲ್ಲಿಸಬೇಕಾದ ಪೂರ್ಣ ವಿಳಾಸ ಜಂಟಿ ನಿರ್ದೇಶಕರ ಕಚೇರಿ, ಬೆಂಗಳೂರು ನಗರ ಜಿಲ್ಲೆ, 4ನೇ ಮುಖ್ಯರಸ್ತೆ, 16ನೇ ಅಡ್ಡರಸ್ತೆ, ಸಂಪಂಗಿರಾಮನಗರ ಪೊಲೀಸ್ ಠಾಣೆ ಎದರು, ಸಂಪಂಗಿರಾಮನಗರ, ಬೆಂಗಳೂರು – 560 027. ಅರ್ಜಿ ಸಲ್ಲಿಸಲು 15–11–2018 ಕೊನೆಯ ದಿನಾಂಕವಾಗಿರುತ್ತದೆ.

ಸಂಖ್ಯೆ

## ಏಕವ್ಯಕ್ತಿ ಮತ್ತು ಸಮೂಹ ಕಲಾಪ್ರದರ್ಶನಗಳಿಗೆ ಧನಸಹಾಯಕ್ಕೆ ಅರ್ಜಿ ಆಹ್ವಾನ
## (ಚಿತ್ರಕಲಾವಿದರಿಗೆ ಮಾತ್ರ)

ಬೆಂಗಳೂರು, ಅಕ್ಟೋಬರ್ 31, (ಕರ್ನಾಟಕ ವಾರ್ತೆ)

ಕರ್ನಾಟಕ ಲಲಿತಕಲಾ ಅಕಾಡೆಮಿಯು ರಾಜ್ಯದ ಕಲಾವಿದರಿಗೆ ರಾಜ್ಯದ ಒಳಗೆ ಮತ್ತು ಹೊರ ರಾಜ್ಯಗಳಲ್ಲಿ ಏಕವ್ಯಕ್ತಿ ಮತ್ತು ಸಮೂಹ ಕಲಾಪ್ರದರ್ಶನ ಏರ್ಪಡಿಸಲು ಧನಸಹಾಯ ನೀಡುತ್ತಿದೆ.

ಅಂತೆಯೇ 2018ನೇ ಸಾಲಿನ ಏಕವ್ಯಕ್ತಿ ಮತ್ತು ಸಮೂಹ ಕಲಾಪ್ರದರ್ಶನಕ್ಕೆ ಧನಸಹಾಯ ನೀಡಲು ಅರ್ಜಿಗಳನ್ನು ಆಹ್ವಾನಿಸಿದೆ.

ಈ ಪ್ರದರ್ಶನದಲ್ಲಿ ಭಾಗವಹಿಸಲಿಚ್ಛಿಸುವ ಕಲಾವಿದರು ತಾವು ರಚಿಸಿದ ಕಲಾಕೃತಿಗಳ 5 7 ಅಂಗುಲ ಅಳತೆಯ ಛಾಯಾಚಿತ್ರಗಳನ್ನು ಕಳುಹಿಸಬೇಕಾಗಿದ್ದು ಅವು ಕಳೆದ 2 ವರ್ಷಗಳಿಂದೀಚೆಗೆ ರಚಿಸಿದ ಕಲಾಕೃತಿಗಳಾಗಿರಬೇಕು. ಯಾವುದೇ ಕಲಾಪ್ರದರ್ಶನದಲ್ಲಿ ಪ್ರದರ್ಶನಗೊಂಡಿರಬಾರದು.

ಈ ಧನಸಹಾಯಕ್ಕೆ ಆಸಕ್ತ ಕಲಾವಿದರು ತಮ್ಮ ಕನಿಷ್ಠ ಐದು ಕಲಾಕೃತಿಗಳ ಛಾಯಾಚಿತ್ರಗಳು ಮತ್ತು ಕಲಾವಿದರ ಭಾವಚಿತ್ರ, ಪರಿಚಯ ಪತ್ರದೊಂದಿಗೆ ಸೂಕ್ತ ದಾಖಲೆಗಳನ್ನು ಲಗತ್ತಿಸಿ ದಿನಾಂಕ: 30-11-2018ರ ಒಳಗಾಗಿ ಅಕಾಡೆಮಿಯ ಕಚೇರಿಗೆ ( ಅಂಚೆ ಮೂಲಕ ಅಥವಾ ಖುದ್ದಾಗಿ) ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಅರ್ಜಿಯನ್ನು ರಿಜಿಸ್ಟ್ರಾರ್, ಕರ್ನಾಟಕ ಲಲಿತಕಲ ಅಕಾಡೆಮಿ, ಕನ್ನಡ ಭವನ, 2ನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು – 560 002 ಇವರಿಗೆ ತಲುಪಿಸಬಹುದಾಗಿದೆ. ತಡವಾಗಿ ಬಂದ ಅರ್ಜಿ ಹಾಗೂ ಅಪೂರ್ಣ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

ಹೆಚ್ಚಿನ ವಿವರಗಳಿಗಾಗಿ ಅಕಾಡೆಮಿಯ ವೆಬ್‌ಸೈಟ್ www.lalitkalakarnataka.org ಇ-ಮೇಲ್ kla.karnataka@gmail.com, ಹಾಗೂ ದೂರವಾಣಿ 080-22480297 ಸಂಪರ್ಕಿಸಬಹುದಾಗಿದೆ. ಅಕಾಡೆಮಿಯ ತೀರ್ಮಾನವೇ ಅಂತಿಮ.

ಅರ್ಜಿಯನ್ನು ಕರ್ನಾಟಕ ಲಲಿತಕಲಾ ಅಕಾಡೆಮಿಯ ಕಚೇರಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು – 560 002 ಇಲ್ಲಿ ಖುದ್ದಾಗಿ ಅಥವಾ ಅಕಾಡೆಮಿಯ ವೆಬ್‌ಸೈಟ್ www.lalitkalakarnataka.org ಫೇಸ್‌ಬುಕ್ ಮುಖಾಂತರ ಅರ್ಜಿಯನ್ನು ಪಡೆಯಬಹುದಾಗಿದೆ.

ಸಂಖ್ಯೆ

## ಚಿತ್ರಕಲಾ ವ್ಯಾಸಂಗ ಮಾಡುತ್ತಿರುವ ಸಾಮಾನ್ಯವರ್ಗ/ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ

ಬೆಂಗಳೂರು, ಅಕ್ಟೋಬರ್ 31, (ಕರ್ನಾಟಕ ವಾರ್ತೆ)

ಕರ್ನಾಟಕ ಲಲಿತಕಲಾ ಅಕಾಡೆಮಿಯು ಚಿತ್ರಕಲೆಯನ್ನು ಉತ್ತೇಜಿಸುವ ದೃಷ್ಟಿಯಿಂದ ಚಿತ್ರಕಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಸಾಮಾನ್ಯ ವರ್ಗ/ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅರ್ಹ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ವಿದ್ಯಾಭ್ಯಾಸದ ಅವಧಿಯಲ್ಲಿ ಒಂದು ಬಾರಿ ಮಾತ್ರ ವಿದ್ಯಾರ್ಥಿ ವೇತನವನ್ನು (one time scholarship) ನೀಡಲು ನಿರ್ಧರಿಸಿದೆ.

ಕರ್ನಾಟಕದ ಅಂಗೀಕೃತಗೊಂಡ ಚಿತ್ರಕಲಾ ಶಿಕ್ಷಣಕ್ಕೆ ಸಂಬಂಧಪಟ್ಟ ಬಿ.ಎಫ್.ಎ/ಎಂ.ಎಫ್.ಎ. ಚಿತ್ರಕಲಾ ವಿದ್ಯಾಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ಚಿತ್ರಕಲಾ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿದಾರರು ಕರ್ನಾಟಕದವರಾಗಿದ್ದು, ವಯೋಮಿತಿ 20 ರಿಂದ 25 ವರ್ಷ ಒಳಗಿರಬೇಕು.

ಆಸಕ್ತಿಯುಳ್ಳ ವಿದ್ಯಾರ್ಥಿಗಳು ತಮ್ಮ ಪೂರ್ಣ ವಿವರಗಳೊಂದಿಗೆ ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ ಎರಡು ಭಾವಚಿತ್ರ ಹಾಗೂ 5*6 ಅಳತೆಯ ಎರಡು ಚಿತ್ರಕಲಾಕೃತಿಗಳ ಛಾಯಾಚಿತ್ರಗಳು ಸೇರಿದಂತೆ ಈ ಹಿಂದೆ ವಿದ್ಯಾರ್ಥಿ ವೇತನ ಪಡೆದಿಲ್ಲವೆಂದು ಇದೇ ಮೊದಲ ಸಲವೆಂದು ಸಂಬಂಧಪಟ್ಟ ಕಲಾವಿದ್ಯಾಲಯದ ಮುಖ್ಯಸ್ಥರ/ಪ್ರಾಚಾರ್ಯರ ದೃಢೀಕರಣದೊಂದಿಗೆ ದಿನಾಂಕ: 30-11-2018 ರ ಒಳಗಾಗಿ ಅಕಾಡೆಮಿಗೆ ಅರ್ಜಿಯನ್ನು ಸಲ್ಲಿಸಬಹುದು.

ಅರ್ಜಿಯನ್ನು ರಿಜಿಸ್ಟ್ರಾರ್, ಕರ್ನಾಟಕ ಲಲಿತಕಲಾ ಅಕಾಡೆಮಿಯ ಕಚೇರಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು – 560 002 ಇವರಿಗೆ ತಲುಪಿಸಬಹುದಾಗಿದೆ.

ತಡವಾಗಿ ಬಂದ ಅರ್ಜಿ ಹಾಗೂ ಅಪೂರ್ಣ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ವಿವರಗಳಿಗಾಗಿ ಅಕಾಡೆಮಿಯ ವೆಬ್‌ಸೈಟ್ www.lalitkalakarnataka.org ಇ-ಮೇಲ್ kla.karnataka@gmail.com, ಹಾಗೂ ದೂರವಾಣಿ 080-22480297 ಸಂಪರ್ಕಿಸಬಹುದಾಗಿದೆ.

ಸಂಖ್ಯೆ

## ಎರಡು ದಿನಗಳ ರಾಷ್ಟ್ರೀಯ ವಿಚಾರ ಸಂಕಿರಣ

ಬೆಂಗಳೂರು, ಅಕ್ಟೋಬರ್ 31, (ಕರ್ನಾಟಕ ವಾರ್ತೆ)

ಸಮಾಜ ಕಲ್ಯಾಣ ಇಲಖೆಯಡಿಯಲ್ಲಿ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು ಇಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಸಂಸ್ಥೆಯ ವತಿಯಿಂದ "ಭಾರತದಲ್ಲಿನ ಪರಿಶಿಷ್ಟ ಪಂಗಡಗಳ ರಕ್ಷಣೆ, ಕಲ್ಯಣ ಮತ್ತು ಸಬಲೀಕರಣಕ್ಕಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳು ಮತ್ತು ಕಾರ್ಯಕ್ರಮಗಳು" (Central and State government and Programmes for Protection, Welfare and Empowerment of scheduled Tribes in India) " ಎಂಬ ವಿಷಯ ಕುರಿತು ಎರಡು ದಿನಗಳ ರಾಷ್ಟ್ರೀಯ ವಿಚಾರ ಸಂಕಿರಣವನ್ನು ಡಿಸೆಂಬರ್ 28 ಮತ್ತು 29 ರಂದು ಬೆಂಗಳೂರು ನಗರದಲ್ಲಿ ಆಯೋಜಿಸಲಾಗಿದೆ.

ಅಸಕ್ತ ಸಂಶೋಧನಾಸಕ್ತರು/ವಿದ್ಯಾರ್ಥಿಗಳು, ಸಂಶೋಧನ ವಿದ್ವಾಂಸರು, ಉಪನ್ಯಾಸರು ಮತ್ತು ಪ್ರಾಧ್ಯಾಪಕರು ತಮ್ಮ ಬರವಣಿಗೆ ಸಾರಾಂಶವನ್ನು ಡಿಸೆಂಬರ್ 21 ರೊಳಗೆ ಕಚೇರಿಯ ಇ-ಮೇಲ್ trimysore@gmail.com ಮೂಲಕ ಕಳುಹಿಸಬಹುದಾಗಿದೆ.

ಸಂಖ್ಯೆ

## ಜನವರಿ 18 ರಿಂದ 20 ರವರೆಗೆ

### "ಅಂತರರಾಷ್ಟ್ರೀಯ ಸಾವಯವ ಮತ್ತು ಸಿರಿಧಾನ್ಯಗಳ ವಾಣಿಜ್ಯ ಮೇಳ -2019"

ಬೆಂಗಳೂರು, ಅಕ್ಟೋಬರ್ 31, (ಕರ್ನಾಟಕ ವಾರ್ತೆ)

ರಾಜ್ಯದ ಸಾವಯವ ಹಾಗೂ ಸಿರಿಧಾನ್ಯಗಳಿಗೆ ಮಾರುಕಟ್ಟೆ ಸಂಪರ್ಕ ಕಲ್ಪಿಸುವ ಹಾಗೂ ಗ್ರಾಹಕರಲ್ಲಿ ಅರಿವು ಮೂಡಿಸುವ ಮುಖ್ಯ ಉದ್ದೇಶಗಳೊಂದಿಗೆ ಬೆಂಗಳೂರು ಅರಮನೆ ಆವರಣದಲ್ಲಿ ಜನವರಿ 18 ರಿಂದ 20, 2019 ರವರೆಗೆ "ಅಂತರರಾಷ್ಟ್ರೀಯ ಸಾವಯವ ವಸ್ತು ಮತ್ತು ಸಿರಿಧಾನ್ಯಗಳ ವಾಣಿಜ್ಯ ಮೇಳ-2019 ವನ್ನು ಆಯೋಜಿಸಲಾಗಿದೆ. ಇದರಲ್ಲಿ ಪ್ರದರ್ಶನಗಳು, ರಾಷ್ಟ್ರೀಯ ಸಮ್ಮೇಳನ ಉತ್ಪಾದಕರ - ಮಾರುಕಟ್ಟೆದಾರರ ಸಭೆ ರೈತರ ಕಾರ್ಯಾಗಾರ ಒಳಗೊಂಡಿದ್ದು, ಸಾವಯವ ಕೃಷಿಯ ಒಟ್ಟಾರೆ ಅಭಿವೃದ್ಧಿಗೆ ಪೂರಕವಾಗಿರುತ್ತದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಸಂಖ್ಯೆ

# ಚುನಾವಣಾ ಆಯೋಗದಿಂದ ಮತದಾರರ ನೋಂದಣಿ ಕಾರ್ಯ

ಬೆಂಗಳೂರು, ಅಕ್ಟೋಬರ್ 31, (ಕರ್ನಾಟಕ ವಾರ್ತೆ)

ಭಾರತ ಚುನಾವಣಾ ಆಯೋಗದ ನಿರ್ದೇಶನದನ್ವಯ ಕರ್ನಾಟಕದಲ್ಲಿ ಮತದಾರರ ನೋಂದಣಿ ಕಾರ್ಯಕ್ರಮವನ್ನು ಕೈಗೊಳ್ಳಲಾಗಿದೆ.

ಪರಿಷ್ಕರಣೆ ಪೂರ್ವ ಕಾರ್ಯಗಳು, ಚುನಾವಣೆಗೆ ಸಂಬಂಧಿಸಿದಂತೆ ಅಧಿಕಾರಿಗಳ ತರಬೇತಿಗೆ ಪ್ರಚಾರ ಸಾಮಗ್ರಿ ತಯಾರಿಕೆ – ದಿನಾಂಕ: 15–07–2018 ರೊಳಗೆ

ಬಿಎಲ್‌ಓಗಳಿಂದ ಮನೆಯಿಂದ ಮನೆಗೆ ಭೇಟಿ – 14–07–2018 ರಿಂದ 10–08–2018.

ಮತಗಟ್ಟೆಗಳ ಸುಧಾರಣೆ ಮತ್ತು ಮತದಾನ ಕಟ್ಟಡಗಳ ಖುದ್ದು ಪರಿಶೀಲನೆ – 27–07–2018 ರಿಂದ 15–09–2018.

ಚುನಾವಣಾ ಪೂರಕ ಸಿದ್ಧತೆ, ಮತದಾರರ ಕರಡು ಪಟ್ಟಿ ತಯಾರಿಕೆ ಹಾಗೂ ನವೀಕರಣ ದಿನಾಂಕ: 17–09–2018 ರಿಂದ 10–10–2018.

ಪರಿಷ್ಕರಣೆ ಕಾರ್ಯಗಳು – ಮತಪಟ್ಟಿಯಲ್ಲಿ ಸಂಯೋಜಿತ ಛಾಯಾಚಿತ್ರ ಕರಡುಪಟ್ಟಿ ಪ್ರಕಟಣೆ – 10–10–2018.

ಹಕ್ಕುಗಳು ಮತ್ತು ಆಕ್ಷೇಪಣೆಗಳಿಗೆ ಕಾಲಾವಕಾಶ 10–10–2018 ರಿಂದ 20–11–2018

ಹಕ್ಕುಗಳು ಮತ್ತು ಆಕ್ಷೇಪಣೆಗಳ ವಿಲೇವಾರಿ – 20–12–2018 ರೊಳಗೆ.

ಡೇಟಾ ಬೇಸ್‌ಗಳ ಮತ್ತು ಪೂರಕ ವಿಷಯಗಳ ನವೀಕರಣ – 3–1–2019 ರೊಳಗೆ. ಛಾಯಾಚಿತ್ರ ಒಳಗೊಂಡ ಅಂತಿಮ ಮತದಾರರ ಪಟ್ಟಿ ಪ್ರಕಟಣೆ – 4–1–2019

# ರಾಷ್ಟ್ರೀಯ ಏಕತಾ ದಿವಸದ ಅಂಗವಾಗಿ ಕೃಷಿ ಸಚಿವ ಎನ್.ಹೆಚ್. ಶಿವಶಂಕರರೆಡ್ಡಿ ಅವರಿಂದ ಪ್ರತಿಜ್ಞಾ ವಿಧಿ ಬೋಧನೆ

**ಬೆಂಗಳೂರು, ಅಕ್ಟೋಬರ್ 31 (ಕರ್ನಾಟಕ ವಾರ್ತೆ) :**

ರಾಷ್ಟ್ರೀಯ ಏಕತಾ ದಿವಸದ ಅಂಗವಾಗಿ ಕೃಷಿ ಸಚಿವ ಎನ್.ಹೆಚ್. ಶಿವಶಂಕರರೆಡ್ಡಿ ಅವರು ಪ್ರತಿಜ್ಞಾ ವಿಧಿ ಬೋಧಿಸಿದರು.

ಸರ್ಧಾರ್ ವಲ್ಲಭಾಯ್ ಪಟೇಲ್ ಅವರ ಜನ್ಮದಿನದ ಅಂಗವಾಗಿ ವಿಧಾನ ಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಸಚಿವಾಲಯದ ಹಿರಿಯ ಅಧಿಕಾರಿಗಳು, ಸಿಬ್ಬಂದಿಗಳಿಗೆ ಕೃಷಿ ಸಚಿವರು ಪ್ರತಿಜ್ಞಾ ವಿಧಿ ಬೋಧಿಸಿದರು.

ಸರ್ಧಾರ್ ವಲ್ಲಭಾಯ್ ಪಟೇಲ್ ಅವರ ದೂರದೃಷ್ಟಿ ಮತ್ತು ಕಾರ್ಯಕ್ಷಮತೆಯಿಂದ ಸಾಧಿಸಿದ ರಾಷ್ಟ್ರೀಯ ಏಕೀಕರಣ ಸ್ಪೂರ್ತಿಯನ್ನು ಕಾಪಾಡುತ್ತೇನೆ. ರಾಷ್ಟ್ರದ ಆಂತರಿಕ ಭದ್ರತೆಯನ್ನು ಖಾತ್ರಿಪಡಿಸಲು ನಾನು ನನ್ನದೇ ಆದ ಕೊಡುಗೆಯನ್ನು ನೀಡುತ್ತೇನೆ. ಅಲ್ಲದೆ ರಾಷ್ಟ್ರದ ಐಕ್ಯತೆ, ಸಮಗ್ರತೆ ಮತ್ತು ಭದ್ರತೆಯನ್ನು ಕಾಪಾಡಲು ನನ್ನನ್ನು ಅರ್ಪಿಸಿಕೊಳ್ಳುತ್ತೇನೆ ಹಾಗೂ ನನ್ನ ದೇಶಭಾಂಧವರಲ್ಲಿ ಈ ಸಂದೇಶವನ್ನು ಸಾರಲು ಶ್ರಮಿಸುತ್ತೇನೆ ಎಂದು ಕೃಷಿ ಸಚಿವ ಎನ್.ಹೆಚ್. ಶಿವಶಂಕರರೆಡ್ಡಿ ಅವರು ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಪ್ರತಿಜ್ಞಾವಿಧಿ ಬೋದಿಸಿದರು.

ಸರ್ಕಾರದ ಮುಖ್ಯ ಕಾರ್ಯದರ್ಶಿ ವಿಜಯಭಾಸ್ಕರ್, ಆರ್ಥಿಕ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಐ.ಎಸ್.ಎನ್. ಪ್ರಸಾದ್, ಜಲಸಂಪನ್ಮೂಲ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಾಕೇಶ್‌ಸಿಂಗ್, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಅಂಜುಂಪರ್ವೆಜ್ ಸೇರಿದಂತೆ ಸಚಿವಾಲಯದ ಹಿರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಪ್ರತಿಜ್ಞಾವಿಧಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಪ್ರತಿಜ್ಞಾವಿಧಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಕೃಷಿ ಸಚಿವರು ಭಾರತ ದೇಶವನ್ನು ಏಕೀಕರಣಗೊಳಿಸಲು ಸರ್ದಾರ್ ವಲ್ಲಭಾಯ್ ಪಟೇಲ್‌ರ ಕೊಡುಗೆ ಅಪಾರ, ಹರಿದು ಹಂಚಿಹೋಗಿದ್ದ ದೇಶವನ್ನು ಒಗ್ಗೂಡಿಸಿದ ಕೀರ್ತಿ ಸರ್ದಾರ್ ವಲ್ಲಭಾಯ್‌ಪಟೇಲ್‌ರಿಗೆ ಸಲ್ಲುತ್ತದೆ. ಅವರ ಆದರ್ಶಗಳನ್ನು ನಾವೆಲ್ಲರೂ ಮೈಗೂಡಿಸಿಕೊಂಡು ದೇಶದ ಉದ್ದಗಲಕ್ಕೂ ಅವರ ಸಂದೇಶಗಳನ್ನು ಪ್ರಚಾರಪಡಿಸೋಣ ಎಂದು ಕೃಷಿ ಸಚಿವರು ತಿಳಿಸಿದರು.